## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಕೆ.ಸತೀಶ್, ಅಧ್ಯಕ್ಷರು, ಐತೂರು ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ ಇವರ ಪತ್ರ ಸಂಖ್ಯೆ:ದಕಜಿಪ:ಗ್ರಾಪಂ:ಸಿಆರ್:261/2016-17(ಸಿ2), ದಿನಾಂಕ:08-12-2017.
2) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 22 ಗ್ರಾಪಂಅ 2018, ದಿನಾಂಕ:11.02.2018.
3) ಶ್ರೀ ಕೆ.ಸತೀಶ್, ಅಧ್ಯಕ್ಷರು, ಐತೂರು ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರ ಲಿಖಿತ ಹೇಳಿಕೆ ದಿನಾಂಕ:11.02.2018.
4) ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:27.03.2018, 30.04.2018, 14.06.2018, 24.09.2018 ಮತ್ತು 01.02.2019.

ಪ್ರಸ್ತಾವನೆ:

ಮೇಲೆ ಓದಲಾದ (1)ರಲ್ಲಿ ದಕ್ಷಿಣ ಕನ್ನಡ ಜಿಲ್ಲೆ, ಪುತ್ತೂರು ತಾಲ್ಲೂಕು, ಐತೂರು ಗ್ರಾಮ ಪಂಚಾಯಿತಿಯಲ್ಲಿ 2015-16ನೇ ಸಾಲಿನಲ್ಲಿ ಖರೀದಿಸಿಲಾದ ಫರ್ನಿಚರ್ ಹಾಗೂ ಇನ್ನಿತರ ಸಾಮಗ್ರಿಗಳ ಬಗ್ಗೆ ಶ್ರೀ ರಾಮಣ್ಣ ರೈ, ಅತ್ಯಡ್ಕ ಗ್ರಾಮ, ಪುತ್ತೂರು ತಾಲ್ಲೂಕು ಇವರು ನೀಡಿದ ದೂರಿನ ಮೇರೆಗೆ ಮುಖ್ಯ ಲೆಕ್ಕಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು, ಇವರಿಗೆ ಪರಿಶೀಲನೆ ನಡೆಸಿ ವರದಿ ನೀಡಲು ಸೂಚಿಸಿದ್ದು, ಮುಖ್ಯ ಲೆಕ್ಕಾಧಿಕಾರಿಯವರು ತನಿಖೆ ನಡೆಸಿದಾಗ ಗ್ರಾಮ ಪಂಚಾಯತ್‌ಗಳ ಆಯವ್ಯಯ ಮತ್ತು ಲೆಕ್ಕಪತ್ರಗಳ ನಿಯಮಗಳನ್ನು ಉಲ್ಲಂಘಿಸಿರುವುದು ಕಂಡು ಬಂದಿರುವುದಾಗಿ ವರದಿ ನೀಡಿರುತ್ತಾರೆ. ಆದುದರಿಂದ ಗ್ರಾಮ ಪಂಚಾಯತ್ ಅಧ್ಯಕ್ಷರಾದ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4)ರಂತೆ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರಲ್ಲಿ ಶ್ರೀ ಕೆ.ಸತೀಶ್, ಅಧ್ಯಕ್ಷರು, ಐತೂರು ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ನಿಯಮಾನುಸಾರ ಸರ್ಕಾರದಿಂದ ಕಾರಣ ಕೇಳುವ ನೋಟೀಸು ಜಾರಿ ಮಾಡಿ, ತಮ್ಮ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಸಮಜಾಯಿಷಿಯನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು.

ಅದರಂತೆ, ಮೇಲೆ ಓದಲಾದ (3)ರಲ್ಲಿ ಶ್ರೀ ಕೆ.ಸತೀಶ್, ಅಧ್ಯಕ್ಷರು, ಐತೂರು ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ದಿನಾಂಕ:11.02.2018ರಂದು ಲಿಖಿತ ಹೇಳಿಕೆ ಸಲ್ಲಿಸಿದ್ದು, ಅದರಲ್ಲಿನ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ-

- 2015-16ನೇ ಸಾಲಿನ ಐತೂರು ಗ್ರಾಮ ಪಂಚಾಯಿತಿಯ ಆಯವ್ಯಯದಲ್ಲಿ ರೂ.1.5 ಲಕ್ಷಗಳ ಅನುದಾನ ಮೀಸಲಿಡಲಾಗಿದೆ. ಸದರಿ ಆಯವ್ಯಯಕ್ಕೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಪುತ್ತೂರು ಇವರಿಂದ ಅನುಮೋದನೆ ಪಡೆದುಕೊಳ್ಳಲಾಗಿದೆ.

- ದಿನಾಂಕ:07-11-2015ರ ಐತೂರು ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯ ನಿರ್ಣಯದಂತೆ ಕ್ರಿಯಾಯೋಜನೆ ತಯಾರಿಸಲಾಗಿ ತಾಲ್ಲೂಕು ಪಂಚಾಯತ್ ಅನುಮೋದನೆ ಪಡೆದುಕೊಳ್ಳಲಾಗಿದೆ. ಸಾಮಾಗ್ರಿ ಖರೀದಿಗಾಗಿ ದಿನಾಂಕ:16-12-2015ರ ಉದಯವಾಣಿ ದಿನಪತ್ರಿಕೆಯಲ್ಲಿ ಸ್ಪರ್ಧಾತ್ಮಕ ದರಪಟ್ಟಿಗಳನ್ನು ಸಲ್ಲಿಸಲು ಸಾರ್ವಜನಿಕ ಪ್ರಕಟಣೆ ನೀಡಲಾಗಿದೆ. ದಿನಾಂಕ:28-12-2015ರಂದು ಟೆಂಡರ್ ತೆರೆಯಲಾಗಿ, ಸಾಮಾಗ್ರಿ ಪೂರೈಸಲು ಬಂದಿರುವ ದರಪಟ್ಟಿಗಳನ್ನು ದಿನಾಂಕ:04-01-2016ರ ಐತೂರು ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಮಂಡಿಸಲಾಗಿದೆ.

- ಸಾಮಗ್ರಿ ಪಡೆದು ದರಪಟ್ಟಿ ಅನುಮೋದನೆಗೊಂಡ ದರಗಳ ಪ್ರಕಾರವೇ ಅಧಿಕೃತ ಸರಬರಾಜುದಾರರಿಗೆ ಅಕೌಂಟ್ ಪಾವತಿ ಚೆಕ್ ಮೂಲಕವೇ ಬಿಲ್ ಪಾವತಿಸಲಾಗಿದೆ. ಈ ಪ್ರಕಾರವಾಗಿ ಸಾಮಗ್ರಿ ಖರೀದಿಯನ್ನು ನಿಯಮಗಳ ಪ್ರಕಾರವೇ ಖರೀದಿಗೊಳಿಸಲಾಗಿದ್ದು, ಯಾವುದೇ ಅವ್ಯವಹಾರಗಳನ್ನು ಎಸಗಿರುವುದಿಲ್ಲ ಎಂಬುದಾಗಿ ಈ ಮೂಲಕ ತಮ್ಮ ಆದ್ಯ ಗಮನಕ್ಕೆ ತರಬಯಸುತ್ತೇನೆ.

- ಮುಖ್ಯ ಲೆಕ್ಕಾಧಿಕಾರಿಗಳ ತನಿಖಾ ವರದಿಯಲ್ಲಿ, ಖರೀದಿ ಪ್ರಕ್ರಿಯೆಯಲ್ಲಿ ಟೆಂಡರ್ ಪ್ರಕ್ರಿಯೆ ನಡೆಸದೆ, ಟೆಂಡರ್ ನಿಯಮಗಳನ್ನು ಪಾಲಿಸದೇ, ದರಪಟ್ಟಿ ಆಧಾರದಲ್ಲಿ ಖರೀದಿಸಿರುವುದು ಲೋಪವಾಗಿರುತ್ತದೆ ಮತ್ತು ಖರೀದಿ ಪ್ರಕ್ರಿಯೆಯಲ್ಲಿ ಕೆ.ಟಿ.ಪಿ.ಪಿ. ನಿಯಮಗಳನ್ನು ಪಾಲಿಸಿರುವುದಿಲ್ಲ ಎಂಬುದಾಗಿ ವರದಿ ಸಲ್ಲಿಸಿರುತ್ತಾರೆ. ಆದರೆ ಸದರಿ ಕ್ರಿಯಾಯೋಜನೆಯಲ್ಲಿನ ಕಾಮಗಾರಿಗಳು ರೂ. 1 ಲಕ್ಷಕ್ಕಿಂತ ಕಡಿಮೆ ಮೊತ್ತದವುಗಳಾಗಿದ್ದು, ಸದರಿ ಖರೀದಿಯನ್ನು ಸ್ಪರ್ಧಾತ್ಮಕ ಕೋಟೇಷನ್(ದರಪಟ್ಟಿ) ಕರೆಯುವ ಮೂಲಕ ಖರೀದಿ ಮಾಡಬಹುದಾಗಿರುತ್ತದೆ.

- ಅದರಂತೆ ನಿಯಮಾನುಸಾರ ಖರೀದಿ ಮಾಡಲಾಗಿದೆ. ಸರ್ಕಾರದ ಆದೇಶದ ಪ್ರಕಾರ ರೂ. 1 ಲಕ್ಷ ಮೀರಿದ ಖರೀದಿಗಳಿಗೆ ಮಾತ್ರ ಕೆ.ಟಿ.ಪಿ.ಪಿ ನಿಯಮ ಅನ್ವಯವಾಗುವುದು. ಸದರಿ ವರದಿಯ ಪ್ರಕಾರ ರೂ. 1,39,850.00 ಮೊತ್ತದ ಪೀಠೋಪಕರಣಗಳನ್ನು ಬೇರೆ ಬೇರೆ ಲೆಕ್ಕ ಶೀರ್ಷಿಕೆಗಳಡಿ ಖರೀದಿಸಲಾಗಿದ್ದು, ರೂ. ಒಂದು ಲಕ್ಷಕ್ಕಿಂತ ಕಡಿಮೆ ಮೊತ್ತದವುಗಳಾಗಿರುತ್ತವೆ. ಆದುದರಿಂದ ಸದರಿ ಖರೀದಿಯಲ್ಲಿ ಕೆ.ಟಿ.ಪಿ.ಪಿ ನಿಯಮಗಳ ಉಲ್ಲಂಘನೆ ಆಗಿರುವುದಿಲ್ಲ ಎಂಬುದಾಗಿ ತಮ್ಮ ಗಮನಕ್ಕೆ ತರಲಾಗಿದೆ.

- ಗ್ರಾಮ ಪಂಚಾಯಿತಿಯ ಲೆಕ್ಕಪತ್ರ ನಿರ್ವಹಣೆ, ಹಣಕಾಸು ನಿಯಂತ್ರಣ, ಗ್ರಾಮ ಪಂಚಾಯಿತಿಯ ವಿವಿಧ ವಹಿಗಳ ನಿರ್ವಹಣೆ, ಗ್ರಾಮ ಪಂಚಾಯಿತಿಯು ಮಾಡಿರುವ ವೋಚರ್‌ಗಳ ದಾಖಲಾತಿಗಳನ್ನು ನಿರ್ವಹಿಸುವ ಜವಾಬ್ದಾರಿ ಮತ್ತು ಗ್ರಾಪಂ ಆಡಳಿತ ಮಂಡಳಿಗೆ ಚಾಲ್ತಿಯಲ್ಲಿರುವ ನಿಯಮಗಳ ಬಗ್ಗೆ ಮಾಹಿತಿ ನೀಡುವುದು ಮತ್ತು ಕಾನೂನುಗಳ ಬಗ್ಗೆ ತಿಳುವಳಿಕೆ ನೀಡುವುದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮತ್ತು ಕಾರ್ಯದರ್ಶಿಯವರು ಕರ್ತವ್ಯವಾಗಿರುತ್ತದೆ.

- ಈ ಪ್ರಕರಣದ ದೂರುದಾರರಾದ ಶ್ರೀ ರಾಮಣ್ಣ ರೈ ರವರು ಕಳೆದ 2015ರ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ತಮ್ಮ ಪ್ರತಿಸ್ಪರ್ಧಿ ಅಭ್ಯರ್ಥಿಯಾಗಿದ್ದು, ಸದರಿ ಚುನಾವಣೆಯಲ್ಲಿ ಪರಾಭವ ಹೊಂದಿರುವ ಕಾರಣ, ಹತಾಶೆಯಿಂದ ತಮ್ಮ ವಿರುದ್ಧ ರಾಜಕೀಯ ಪ್ರೇರಿತವಾಗಿ ನಕಲಿ ಧಾಖಲೆಗಳನ್ನು ಸೃಷ್ಟಿಸಿ ಇಲ್ಲಸಲ್ಲದ ಆರೋಪಗಳನ್ನು ಸಲ್ಲಿಸಿರುತ್ತಾರೆ.

- ಈ ಹಿಂದೆ ಮತ್ತೊಬ್ಬ ಖಾಸಗಿ ವ್ಯಕ್ತಿಯೊಬ್ಬ ರಾಜಕೀಯ ದುರುದ್ದೇಶದಿಂದ ನೀಡಿದ ದೂರಿಗೆ ಸಂಬಂಧಿಸಿದಂತೆ ತಮ್ಮನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 43ಎ ಅನ್ವಯ ತಮ್ಮನ್ನು ಸದಸ್ಯ ಸ್ಥಾನದಿಂದ ವಜಾಗೊಳಿಸಿದ ಆದೇಶವನ್ನು ಅಮಾನ್ಯಗೊಳಿಸಿದ ಮಾನ್ಯ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯವು ಈ ಕೆಳಕಂಡಂತೆ ಆದೇಶಿಸಿರುತ್ತದೆ-

- "The alleged reasons quoted above in the impugned order are at best only some irregularities, which could be cured at the end of said Grama Panchayath and even with the assistances of Government Authorities and concerned Authorities including the PDO present in the said Grama Panchayath. Instead of doing so, unfortunately, the removal proceedings were undertaken Under Section 43A of the Act, which is an extreme step and which can be taken only in a strong proved case of misappropriation, fraud or corruption made out against an elected representative. The respondent Under Secretary, RDPR department has chosen to pass the impugned order in a rather mechanical and nonspeaking manner. The same cannot be sustained in law."
- ಆದುದರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 1999ರ ನಿಯಮ 21ರಂತೆ ಸರ್ಕಾರದ ಹಣ ದುರುಪಯೋಗವಾಗುವುದನ್ನು ತಡೆಯುವ ನಿಟ್ಟಿನಲ್ಲಿ ಸದ್ಭಾವನೆಯಿಂದ ಮೇಲಿನ ಕ್ರಮಗಳನ್ನು ಅನುಸರಿಸಲಾಗಿದೆ. ಆದುದರಿಂದ ಸದರಿ ನಿಯಮದಡಿ ತಮಗೆ ಪ್ರತಿರಕ್ಷೆ ನೀಡಬೇಕಾಗಿ ಕೋರಿರುತ್ತಾರೆ.

ಈ ಪ್ರಕರಣದ ಬಗ್ಗೆ ದಿನಾಂಕ:29.09.2018 ಮತ್ತು ದಿನಾಂಕ:06.02.2019ರಂದು ಮೌಖಿಕ ವಿಚಾರಣೆಯನ್ನು ನಡೆಸಲಾಯಿತು. ಸದರಿ ವಿಚಾರಣೆಗೆ ಆಪಾದಿತ ಅಧ್ಯಕ್ಷರಾದ ಶ್ರೀ ಕೆ.ಸತೀಶ್, ಶ್ರೀ ಸಚಿನ್‌ಕುಮಾರ್, ಸಹಾಯಕ ಯೋಜನಾಧಿಕಾರಿ, ಶ್ರೀ ನವೀನ್‌ಕುಮಾರ್, ಸಹಾಯಕ ನಿರ್ದೇಶಕರು, ಪುತ್ತೂರು ತಾಲ್ಲೂಕು, ಶ್ರೀ ಪ್ರೇಮ್‌ಸಿಂಗ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಐತೂರು ಗ್ರಾಮ ಪಂಚಾಯಿತಿರವರುಗಳು ಹಾಜರಿದ್ದರು. ಆಪಾದಿತ ಅಧ್ಯಕ್ಷರು ಗ್ರಾಮ ಪಂಚಾಯಿತಿಗೆ ಪೀಠೋಪಕರಣಗಳನ್ನು ಖರೀದಿ ಮಾಡಲು ಪತ್ರಿಕೆಯಲ್ಲಿ ಟೆಂಡರ್ ಪ್ರಕಟಣೆಯನ್ನು ನೀಡಲಾಗಿತ್ತು. ಆದರೆ ನಂತರ ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರು ದರಪಟ್ಟಿಗಳನ್ನು ಕರೆದು ಪೀಠೋಪಕರಣಗಳನ್ನು ಖರೀದಿ ಮಾಡಿರುತ್ತಾರೆ. ಆಧುದರಿಂದ ಇದರಲ್ಲಿ ತಮ್ಮ ತಪ್ಪಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ಜಿಲ್ಲಾ ಪಂಚಾಯಿತಿ ಸಹಾಯಕ ಯೋಜನಾಧಿಕಾರಿಯಾದ ಶ್ರೀ ಸಚಿನ್‌ಕುಮಾರ್‌ರವರು ತಮ್ಮ ಹೇಳಿಕೆಯಲ್ಲಿ ಈ ಪ್ರಕರಣ ನಡೆದ ಸಂದರ್ಭದಲ್ಲಿ ಇದ್ದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರ ವಿರುದ್ಧದ ಇಲಾಖಾ ವಿಚಾರಣೆ ನಡೆಸಿದ್ದು ಮತ್ತು ಅಂತಿಮ ಆದೇಶ ಹೊರಡಿಸುವುದು ಬಾಕಿ ಇರುತ್ತದೆ ಎಂದು ತಿಳಿಸಿರುತ್ತಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಮೇಲ್ಮನವಿದಾರರ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಲಾಗಿ, ಗ್ರಾಮ ಪಂಚಾಯಿತಿಗೆ ಅವಶ್ಯಕವಿರುವ ಸಾಮಗ್ರಿಗಳನ್ನು ಖರೀದಿ ಮಾಡುವಾಗ ಕೆ.ಟಿ.ಪಿ.ಪಿ ನಿಯಮಗಳನ್ನು ಪಾಲನೆ ಮಾಡುವುದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರ ಜವಾಬ್ದಾರಿಯಾಗಿರುತ್ತದೆ. ಇದರಲ್ಲಿ ಅಧ್ಯಕ್ಷರ ಜವಾಬ್ದಾರಿಯು ಸೀಮಿತವಾಗಿರುತ್ತದೆ.. ಆದುದರಿಂದ ಆಪಾದಿತ ಅಧ್ಯಕ್ಷರಿಗೆ ಇವರಿಗೆ ಇನ್ನು ಮುಂದೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಗೆ ನೀಡಿ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43ಎ ಮತ್ತು 48(4) ರನ್ವಯ ಪ್ರಾರಂಭಿಸಲಾದ ಕ್ರಮವನ್ನು ಕೈಬಿಡಲು ಸರ್ಕಾರವು ನಿರ್ಣಯಿಸಿರುತ್ತದೆ.

ಅದರಂತೆ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ಗ್ರಾಪಂಅ 2018, ಬೆಂಗಳೂರು, ದಿನಾಂಕ:20-03-2019.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಕೆ.ಸತೀಶ್, ಅಧ್ಯಕ್ಷರು, ಐತೂರು ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರಿಗೆ ಇನ್ನು ಮುಂದೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆ ನೀಡಿದೆ ಹಾಗೂ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ 1993ರ ಪ್ರಕರಣ .43(ಎ) ಮತ್ತು 48(4)ರಡಿಯಲ್ಲಿ ಅನರ್ಹಗೊಳಿಸಲು ಪ್ರಾರಂಭಿಸಲಾದ ಕ್ರಮವನ್ನು ಕೈಬಿಟ್ಟು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

20/3/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ:</u>

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ. ಮಂಗಳೂರು.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
3) ಶ್ರೀ ಕೆ.ಸತೀಶ್, ಅಧ್ಯಕ್ಷರು, ಐತೂರು ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಐತೂರು ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
5) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
6) ಗಣಕ ಕೋಶ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.